ಶ್ರೀ ಬಿ ಶ್ರೀರಾಮುಲು (ಪ್ರವಾಸೋದ್ಯಮ ಮತ್ತು ಮೂಲಸೌಲಭ್ಯ ಅಭಿವೃದ್ಧಿ ಸಚಿವರು)

ಅ) ಹೌದು

ಆ) ಇಲ್ಲ

ಇ) ಹೌದು

ಈ) ಪ್ರವಾಸೋದ್ಯಮ ಇಲಾಖೆಯಲ್ಲಿ ಈ ರಸ್ತೆಯ ಬಗ್ಗೆ ಸದ್ಯದಲ್ಲಿ ಯಾವುದೇ ಕ್ರಿಯಾ ಯೋಜನೆ ಇರುವುದಿಲ್ಲ

932 (400) ಶ್ರೀ ವಾಟೀಲ್ ಎಸ್ ಎನ್ (ಮುಂಡರಗಿ) ಮಾನ್ಯ ಲೋಕೋಪಯೋಗಿ ಹಾಗೂ ಇಂಧನ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೇ,

ಅ) ರಾಜ್ಯದಲ್ಲಿನ ಲೋಕೋಪಯೋಗಿ ರಸ್ತೆಗಳ ರಿಪೇರಿಗೆ ಸರ್ಕಾರ ನಿಗದಿಪಡಿಸಿರುವ ಹಣವೆಷ್ಟು ಮತ್ತು ಬಿಡುಗಡೆ ಮಾಡಿದ ಅನುದಾನವೆಷ್ಟು,

ಆ) ಮುಂಡರಗಿ ಮತದಾರ ಕ್ಷೇತ್ರದಲ್ಲಿ ಲೋಕೋಪಯೋಗಿ ರಸ್ತೆಗಳೆಷ್ಟು ಕಿಲೋಮೀಟರ್ ಇದೆ,

ಇ) ಅವುಗಳ ರಿಪೇರಿಗಾಗಿ ಸರ್ಕಾರ ಬಿಡುಗಡೆ ಮಾಡಿದ ಹಣವೆಷ್ಟು,

ಈ) ಮೂರು ವರ್ಷಗಳಲ್ಲಿ ರಾಜ್ಯ ಹೆದ್ದಾರಿ ನಿರ್ವಹಣೆಯಡಿ ಮುಂಡರಗಿ ಮತದಾರ ಕ್ಷೇತ್ರದಲ್ಲಿ ರಾಜ್ಯ ಹೆದ್ದಾರಿ ನಿರ್ವಹಣೆಗಾಗಿ ತೆಗೆದುಕೊಂಡ ರಸ್ತೆಗಳು ಹಾಗೂ ಅವುಗಳ ರಿಪೇರಿಗಾಗಿ ಸರ್ಕಾರ ಕೈಗೊಂಡ ಕ್ರಮಗಳೇನು? (ವಿವರ ನೀಡುವುದು)

ಶ್ರೀ ಹೆಚ್ ಡಿ ರೇವಣ್ಣ (ಲೋಕೋಪಯೋಗಿ ಹಾಗೂ ಇಚಿಧನ ಸಚಿವರು)

ಅ) 2006–07ನೇ ಸಾಲಿನಲ್ಲಿ ಲೆ ಶೀ 3054–ರಸ್ತೆ ಮತ್ತು ಸೇತುವೆ (ಯೋಜನೆ) ಮುಖ್ಯಮಂತ್ರಿಗಳ ಗ್ರಾಮೀಣ ರಸ್ತೆ ಅಭಿವೃದ್ಧಿ ನಿಧಿಯಡಿ ರೂ 13271 00 ಲಕ್ಷಗಳ ಅನುದಾನವನ್ನು ಜಿಲ್ಲಾ ಮುಖ್ಯರಸ್ತೆಗಳ ದುರಸ್ತಿ ಹಾಗೂ ನಿರ್ವಹಣೆಗಾಗಿ ಹಾಗೂ ಪೂರಕ ಆಯವ್ಯಯದಲ್ಲಿ ರೂ 15000 00 ಲಕ್ಷಗಳನ್ನು ಬಾಕಿ ಬಿಲ್ಲುಗಳನ್ನು ತೀರುವಳಿ ಮಾಡಲು ನಿಗದಿಪಡಿಸಲಾಗಿದ್ದು, ನದರಿ ಮೊತ್ತವನ್ನು ಬಿಡುಗಡೆ ಮಾಡಲಾಗಿದೆ ಹಾಗೂ ಲೆ ಶೀ 3054–ಯೋಜನೇತರ–12ನೇ ಹಣಕಾಸು ಆಯೋಗದಡಿಯಲ್ಲಿ ರಸ್ತೆ ಮತ್ತು

ಸೇತುವೆಗಳ ನಿರ್ವಹಣೆಗಾಗಿ ರೂ 14615 00 ಲಕ್ಷಗಳನ್ನು ನಿಗದಿಪಡಿಸಲಾಗಿದ್ದು ಸದರಿ ಮೊತ್ತವನ್ನು ಬಿಡುಗಡೆ ಮಾಡಲಾಗಿದೆ

ಆ) ಮುಂಡರಗಿ ಮತದಾರ ಕ್ಷೇತ್ರದಲ್ಲಿ 176 47 ಕಿ ಮೀ ಗಳಷ್ಟು ಉದ್ದದ ಲೋಕೋಪಯೋಗಿ ರಸ್ತೆಗಳಿರುತ್ತವೆ

ಇ) ಮುಂಡರಗಿ ಮತದಾರ ಕ್ಷೇತ್ರ ರಸ್ತೆಗಳ ರಿಪೇರಿಗೆ ಬಿಡುಗಡೆ ಮಾಡಿದ ಹಣ

(ರೂ' ಲಕ್ಷಗಳಲ್ಲಿ)

ಕ್ರಮ ಸಂಖ್ಯೆ	ಲೆ ಶೀ	ಬಿಡುಗಡೆ ಮಾಡಿದ ಹಣ
1	3054 ರಸ್ತೆ ಮತ್ತು ಸೇತುವೆ (ಮುಖ್ಯಮಂತ್ರಿಗಳ ಗ್ರಾಮೀಣ ರಸ್ತೆ ಅಭಿವೃದ್ಧಿ ನಿಧಿ)	329 00
2	3054–12ನೇ ಹಣಕಾಸು	35 28

ಈ) ಮುಂಡರಗಿ ಮತದಾರ ಕ್ಷೇತ್ರದಲ್ಲಿ ಕೆಳಕಂಡ ರಸ್ತೆಗಳನ್ನು ಮೂರು ವರ್ಷಗಳ ರಾಜ್ಯ ಹೆದ್ದಾರಿ ನಿರ್ವಹಣೆಗಾಗಿ ಗದಗ ಪ್ಯಾಕೇಜ್‌ನಡಿ ಕೈಗೊಳ್ಳಲಾಗಿದೆ

1 ಕಲ್ಮಲ –ಶಿಗ್ಗಾಂ ರಾಜ್ಯ ಹೆದ್ದಾರಿ –24 9 ಕಿ ಮೀ

2 ಅರಬಾವಿ – ಚಳ್ಳಕೆರೆ ರಾಜ್ಯ ಹೆದ್ದಾರಿ –37 6 ಕಿ ಮೀ

ಈ ಕಾಮಗಾರಿಗಳು 15–7–2005ರಲ್ಲಿ ಪ್ರಾರಂಭಗೊಂಡಿದ್ದು, ಮುಕ್ತಾಯ ಹಂತದಲ್ಲಿದೆ

933 (401) ಶ್ರೀ ಪಾಟೀಲ್ ಎಸ್ ಎಸ್ (ಮುಂಡರಗಿ) ಮಾನ್ಯ ಪ್ರವಾಸೋದ್ಯಮ ಮತ್ತು ಮೂಲಸೌಲಭ್ಯ ಅಭಿವೃದ್ಧಿ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೇ,

ಅ) ಗದಗ ಜಿಲ್ಲೆ ಮುಂಡರಗಿ ತಾಲ್ಲೂಕು ಶಿಂಗಟಾಲೂರು ಶ್ರೀ ವೀರಭದ್ರೇಶ್ವರ ದೇವಸ್ಥಾನ ಪ್ರವಾಸಿ ಕ್ಷೇತ್ರದಲ್ಲಿ ಸೇರಿದೆಯೇ,

ಆ) ಹಾಗಿದ್ದಲ್ಲಿ, ಅದರ ಅಭಿವೃದ್ಧಿಗಾಗಿ ಸರ್ಕಾರ ಕೈಗೊಂಡ ಕ್ರಮಗಳೇನು?